ಕರ್ನಾಟಕ ಸರ್ಕಾರ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಬೆಂಗಳೂರು

ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿ.ಆರ್.27/2024-25(ಆರ್‌ಪಿಸಿ) ದಿನಾಂಕ: 19-11-2025

# ಅಧಿಸೂಚನೆ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ವಿವಿಧ ವೃಂದದ ದರ್ಜೆ-2 ಅಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ / ಆಂತರಿಕ ನೇಮಕಾತಿ ಮೂಲಕ ಆಯ್ಕೆ ಮಾಡಲು ಸಂಸ್ಥೆ ಅಳವಡಿಸಿಕೊಂಡಿರುವ ಕ.ರಾ.ರ.ಸಾ. ನಿಗಮ ಪದವೃಂದ ಮತ್ತು ನೇಮಕಾತಿ ನಿಯಮಾವಳಿ 1982 ಮತ್ತು ದರ್ಜೆ-2 ಅಧಿಕಾರಿಗಳ ಹುದ್ದೆಗಳ ಆಂತರಿಕ ನೇಮಕಾತಿ ಯೋಜನೆ 1997 ರ ಅನುಸಾರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಸದರಿ ಹುದ್ದೆಗಳ ನೇಮಕಾತಿಗೆ ಅರ್ಹತೆ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

1. **ದರ್ಜೆ-2 ಅಧಿಕಾರಿ ಹುದ್ದೆಗಳ ನೇರ ನೇಮಕಾತಿ ವಿವರ**

| ಕ್ರ.ಸಂ | ಹುದ್ದೆಯ ವಿವರ | ವೇತನ ಶ್ರೇಣಿ (ರೂ./-) | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|
| 1 | ಸಹಾಯಕ ಆಡಳಿತಾಧಿಕಾರಿ | 42600-1300-47800-1510-52330-1750-59330-1960-75010 | 02 |
| 2 | ಸಹಾಯಕ ಲೆಕ್ಕಾಧಿಕಾರಿ | | 02 |
| 3 | ಸಹಾಯಕ ಕಾನೂನು ಅಧಿಕಾರಿ | | 04+01 * |
| 4 | ಸಹಾಯಕ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ | | 04 |
| 5 | ಸಹಾಯಕ ತಾಂತ್ರಿಕ ಶಿಲ್ಪಿ | | 06 |
| 6 | ಸಹಾಯಕ ಸಂಚಾರ ವ್ಯವಸ್ಥಾಪಕ | | 08 |
| | ಒಟ್ಟು | | **26+1 *** |

(*) ಹಿಂದಿನ ನೇಮಕಾತಿಯಲ್ಲಿ ಬಾಕಿ ಉಳಿದಿರುವ ಬಾಕಿ ಹುದ್ದೆ.

2. **ದರ್ಜೆ-2 ಅಧಿಕಾರಿ ಹುದ್ದೆಗಳ ಆಂತರಿಕ ನೇಮಕಾತಿ ವಿವರ**

| ಕ್ರ.ಸಂ | ಹುದ್ದೆಯ ವಿವರ | ವೇತನ ಶ್ರೇಣಿ (ರೂ./-) | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|
| 1 | ಸಹಾಯಕ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ | 42600-1300-47800-1510-52330-1750-59330-1960-75010 | 01 |
| 2 | ಸಹಾಯಕ ಕಾನೂನು ಅಧಿಕಾರಿ | | 01 |
| 3 | ಸಹಾಯಕ ತಾಂತ್ರಿಕ ಶಿಲ್ಪಿ | | 02 |
| 4 | ಸಹಾಯಕ ಸಂಚಾರ ವ್ಯವಸ್ಥಾಪಕ | | 02 |
| | ಒಟ್ಟು | | **06** |

- **ನೇಮಕಾತಿಗೆ ಪ್ರಕಟಿಸಿದ ಸಂಖ್ಯೆಯು ತಾತ್ಕಾಲಿಕವಾಗಿದ್ದು, ನೇಮಕಾತಿ ಸಮಯದಲ್ಲಿ ಸಂಸ್ಥೆಯು ಅವಶ್ಯಕತೆಗೆ ಅನುಗುಣವಾಗಿ ಹುದ್ದೆಗಳ ಸಂಖ್ಯೆಯನ್ನು ಹೆಚ್ಚು / ಕಡಿಮೆ ಮಾಡಿ ಮಾರ್ಪಡಿಸಬಹುದಾಗಿರುತ್ತದೆ.**

- **ಹುದ್ದೆವಾರು ಮತ್ತು ಪ್ರವರ್ಗವಾರು ವಿವರಗಳನ್ನು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯವರು ನೀಡಿದಂತೆ ಅಧಿಸೂಚನೆ ಕೊನೆಯಲ್ಲಿ ಪ್ರಕಟಿಸಲಗಿದೆ.**

3. ಅಧಿಕಾರಿ ಹುದ್ದೆಗಳಿಗೆ ಆಯ್ಕೆಗೊಂಡ ಅಭ್ಯರ್ಥಿಗಳನ್ನು ಒಂದು ವರ್ಷ ತರಬೇತಿ ಅವಧಿಯನ್ನೊಳಗೊಂಡಂತೆ ಎರಡು ವರ್ಷಗಳ ಕಾಲ ಖಾಯಂ ಪೂರ್ವ ಪರೀಕ್ಷಾರ್ಥ ಸೇವೆಯ ಮೇಲೆ ನಿಯೋಜಿಸಲಾಗುವುದು. ಜೊತೆಗೆ ಸಂಸ್ಥೆಯಲ್ಲಿ ಲಭ್ಯವಿರುವ ಇನ್ನಿತರೆ ಸೌಲಭ್ಯಗಳಿಗೆ ಅರ್ಹರಿರುತ್ತಾರೆ.

4. ಖಾಯಂ ಪೂರ್ವ ಪರೀಕ್ಷಾರ್ಥ ಸೇವೆ ಪೂರ್ಣಗೊಳ್ಳುವ ಮೊದಲು ಗಣಕಯಂತ್ರ ಜ್ಞಾನದ ಬಗ್ಗೆ ಕಿಯೋನಿಕ್ಸ್ ಅಥವಾ ಕರ್ನಾಟಕ ಸರ್ಕಾರದಿಂದ ಅಂಗೀಕೃತವಾದ ಇತರೆ ಸಂಸ್ಥೆಗಳಿಂದ ಕನ್ನಡ ಸಾಫ್ಟ್‌ವೇರ್ ಮೂಲಕ ಎಂ.ಎಸ್. ಆಫೀಸ್ ಮತ್ತು ಡೆಸ್ಕ್‌ಟಾಪ್ ಪಬ್ಲಿಷಿಂಗ್ ವಿಷಯದಲ್ಲಿ ಪರಿಣತಿ ಪಡೆದಿರುವ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಹಾಜರುಪಡಿಸುವುದು. ಇಲ್ಲವಾದಲ್ಲಿ ಆಯ್ಕೆಯಾಗಿರುವ ಹುದ್ದೆಯಲ್ಲಿ ಖಾಯಂಗೊಳಿಸಲು ಅವಕಾಶವಿರುವುದಿಲ್ಲ.

5. <u>ದರ್ಜೆ–2 ಅಧಿಕಾರಿ ಹುದ್ದೆಗಳ ನೇರ ನೇಮಕಾತಿಯಶೈಕ್ಷಣಿಕ ವಿದ್ಯಾರ್ಹತೆ</u>

| ಕ್ರಸಂ. | ಹುದ್ದೆ | ವಿದ್ಯಾರ್ಹತೆ |
|---|---|---|
| 1 | ಸಹಾಯಕ ಆಡಳಿತಾಧಿಕಾರಿ<br>Asst. Administrative Officer | A Master Degree in Social Work/ Business Administration with Specialization in Personnel Management/Human relations, from a University established by Law. |
| 2 | ಸಹಾಯಕ ಲೆಕ್ಕಾಧಿಕಾರಿ<br>Asst. Accounts Officer | A Master Degree in Commerce/B.Com with MBA In Finance from a University established by Law. |
| 3 | ಸಹಾಯಕ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ<br>Asst. Labour and Welfare Officer | A post graduation in Social Work (MSW) from a University established by Law with specialization in Industrial relations / Personnel management / labour Welfare |
| 4 | ಸಹಾಯಕ ಕಾನೂನು ಅಧಿಕಾರಿ<br>Asst. Law Officer | a) A Degree in Law from a University established by Law<br>b) Must have practiced as an Advocate for not less than two(2) years. |
| 5 | ಸಹಾಯಕ ತಾಂತ್ರಿಕ ಶಿಲ್ಪಿ<br>Asst. Mechanical Engineer | (a) Must posses. a Degree in Automobile/Mechanical Engineering from a University established by Law and<br>(b) Must possess a valid HTV Driving License or must obtain one within the period of probation failing which the appointment stands cancelled. |
| 6 | ಸಹಾಯಕ ಸಂಚಾರ ವ್ಯವಸ್ಥಾಪಕ<br>Asst. Traffic Manager | (a) A Post Graduation in MBA in Transportation/Marketing/MSW specialization in Personnel Management and Industrial relations/BE in Mechanical/Automobile Engineering from a University established by Law and<br><br>(b) Must posses a valid HTV Driving License or must obtain one within the period of probation failing which the appointment stands cancelled. |

6. <u>ದರ್ಜೆ–2 ಅಧಿಕಾರಿ ಹುದ್ದೆಗಳಆಂತರಿಕ ನೇಮಕಾತಿಯಶೈಕ್ಷಣಿಕ ವಿದ್ಯಾರ್ಹತೆ</u>

| ಕ್ರಸಂ. | ಹುದ್ದೆ | ವಿದ್ಯಾರ್ಹತೆ |
|---|---|---|
| 1 | ಸಹಾಯಕ ಕಾರ್ಮಿಕ ಕಲ್ಯಾಣಾಧಿಕಾರಿ<br>Asst. Labour Welfare Officer | A Bachelor Degree from a University established by Law |
| 2 | ಸಹಾಯಕ ಸಂಚಾರ ವ್ಯವಸ್ಥಾಪಕರು<br>Asst. Traffic Manager | (a) A Bachelor Degree from a University established by Law<br>(b) Must posses a valid HTV Driving License or must obtain one within the period of probation failing which the appointment stands cancelled. |
| 3 | ಸಹಾಯಕ ತಾಂತ್ರಿಕ ಶಿಲ್ಪಿ<br>Asst. Mechanical Engineer. | a) Must posses a Bachelor Degree in Automobile/Mechanical Engineering from a University established by Law.<br>b) Must posses a valid HTV Driving License or must obtain one within the period of probation failing which the appointment stands cancelled. |
| 4 | ಸಹಾಯಕ ಕಾನೂನು ಅಧಿಕಾರಿ<br>Asst. Law Officer | A Degree in Law from a University established by Law |

7. <u>ಆಂತರಿಕ ನೇಮಕಾತಿಗೆ ನಿಬಂಧನೆ</u>

- ಆಂತರಿಕ ನೇಮಕಾತಿ ಯೋಜನೆಯಡಿಯಲ್ಲಿ ಹುದ್ದೆಗಳಿಗೆ ಅರ್ಜಿಯನ್ನು ಸಲ್ಲಿಸಬಯಸುವ ನಾಲ್ಕು ನಿಗಮಗಳ ಉದ್ಯೋಗಿಗಳು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ನೌಕರರ (ನಡತೆ ಮತ್ತು ಶಿಸ್ತು) ನಿಯಮಾವಳಿಗಳು 1971 ರಡಿ ನಿರ್ದಿಷ್ಟ ಪಡಿಸಿರುವ ಈ ಕೆಳಕಂಡ ದಂಡನೆಗಳಿಗೆ ಒಳಪಟ್ಟಿರಬಾರದು.

(ಅ) ವಿನಿಯಮ 18ಎ(iii), (iv), (vi) ಮತ್ತು (vii)ರವರೆಗೆ (ಕಳೆದ 5 (ಐದು) ವರ್ಷಗಳಲ್ಲಿ)

- ವಾರ್ಷಿಕ ವೇತನ ಬಡ್ತಿ ಅಥವಾ ವೇತನವನ್ನು ತಡೆ ಹಿಡಿದಿರುವ್ವದು (Withholding of Increments of wages or pay).
- ಸೇವಾಮುಂಬಡ್ತಿತಡೆ ಹಿಡಿದಿರುವ್ವದು (Withholding of promotion).
- ವೇತನವನ್ನು ಸಂಚಿತ ಅಥವಾ ಸಂಚಿತರಹಿತವಾಗಿಕೆಳಗಿನ ಹಂತಕ್ಕೆಇಳಿಸಿರುವುದು (Reduction to a lower stage in time-scale with or without cumulative effect).
- 60ದಿನಗಳಿಗಿಂತ ಹೆಚ್ಚಿನ ಅವಧಿಗೆ ಅಮಾನತ್ತುಗೊಂಡಿರಬಾರದು(Suspension for a period of not exceeding 60 days)

(ಆ) ವಿನಿಯಮ 18ಎ(viii) (ಪೂರ್ಣಸೇವಾವಧಿಯಲ್ಲಿ)

ನಿರ್ಧಿಷ್ಟ ಅವಧಿಗೆ ಅಥವಾ ಶಾಶ್ವತವಾಗಿ ಸೇವಾ ಮುಂಬಡ್ತಿಗೆ ಪ್ರತಿಬಂಧಕವಾಗುವಂತೆ ಕೆಳಹಂತದ ಮೂಲ ವೇತನ ಶ್ರೇಣಿಗೆ / ದರ್ಜೆಗೆ/ಹುದ್ದೆಗೆ ತಂದಿರುವ್ವದು (Reduction to a lower time-scale grade/post or service, which shall be a bar to the promotion for a specific period or permanently in the entire services).

- ನಿಗಮದಲ್ಲಿ ಕನಿಷ್ಠ ಐದು (5) ವರ್ಷಗಳ ಸೇವೆಯನ್ನು (ಪರೀಕ್ಷಾರ್ಥ ಅವಧಿಯನ್ನು ಒಳಗೊಂಡಂತೆ) ಪೂರ್ಣಗೊಳಿಸಿದ ನೌಕರರು ಮಾತ್ರ ಈ ಕೋಟಾದಡಿಯಲ್ಲಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅವರು 45 ವರ್ಷ ವಯಸ್ಸಿನೊಳಗಿರಬೇಕು.
- ಅಭ್ಯರ್ಥಿಗಳು ಆಂತರಿಕ ನೇಮಕಾತಿ ಹುದ್ದೆಗಳಿಗೆ ನಿಗದಿಪಡಿಸಿದ ಶೈಕ್ಷಣಿಕ ಅರ್ಹತೆಯನ್ನು ಹೊಂದಿರಬೇಕು. ನಿಗದಿತ ಶೈಕ್ಷಣಿಕ ಪರೀಕ್ಷೆಯಲ್ಲಿ ಭಾಷೆಗಳನ್ನೊಳಗೊಂಡಂತೆ ಸರಾಸರಿ 45% ಅಂಕಗಳನ್ನು (ಎಲ್ಲಾ ವರ್ಷಗಳು / ಸೆಮಿಸ್ಟರ್‌ಗಳು ಸೇರಿದಂತೆ) ಪಡೆದಿರಬೇಕು.

8. ದೇಹದಾರ್ಢ್ಯತೆ

- **ಸಹಾಯಕ ಸಂಚಾರ ವ್ಯವಸ್ಥಾಪಕ** ಹುದ್ದೆಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಈ ಕೆಳಕಂಡ ಕನಿಷ್ಠ ದೇಹದಾರ್ಢ್ಯತೆಯನ್ನು ಕಡ್ಡಾಯವಾಗಿ ಹೊಂದಿರಬೇಕು.

| ವಿವರ | ಪುರುಷರು | ಮಹಿಳೆಯರು |
|---|---|---|
| ಎತ್ತರ | 163 ಸೆಂ.ಮೀ | 153 ಸೆಂ.ಮೀ |
| ತೂಕ | 55 ಕೆ.ಜಿ | 50 ಕೆ.ಜಿ |

9. ವಯೋಮಿತಿ

- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಕನಿಷ್ಠ 18 ವರ್ಷಗಳು ಪೂರ್ಣಗೊಂಡಿರಬೇಕು ಹಾಗೂ ಗರಿಷ್ಠ ಈ ಕೆಳಕಾಣಿಸಿದ ವಯಸ್ಸು ಮೀರಿರಬಾರದು.
- ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 262 ಸೇನೆನಿ 2025 ಬೆಂಗಳೂರು ದಿನಾಂಕ 29–09–2025 ರಲ್ಲಿ ನಿರ್ದೇಶಿಸಿರುವಂತೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯಲ್ಲಿ ಮೂರು (3)ವರ್ಷಗಳ ಸಡಿಲಿಕೆಯನ್ನು ನೀಡಲಾಗಿದೆ. ಅದರನ್ವಯ ಗರಿಷ್ಠ ವಯೋಮಿತಿ ಈ ಕೆಳಕಂಡಂತಿರುತ್ತದೆ.

| ಅಭ್ಯರ್ಥಿಗಳು | ಗರಿಷ್ಠ ವಯೋಮಿತಿ |
|---|---|
| ಸಾಮಾನ್ಯ ಅರ್ಹತೆ | 38 ವರ್ಷಗಳು |
| ಪ್ರವರ್ಗ 2ಎ, 2ಬಿ, 3ಎ, 3ಬಿ | 41 ವರ್ಷಗಳು |
| ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಪ್ರವರ್ಗ–1 | 43 ವರ್ಷಗಳು |

- ಇಲಾಖಾ ಅಭ್ಯರ್ಥಿಗಳು ಅವರು ಸಲ್ಲಿಸಿರುವ ಸೇವಾವಧಿಯ ಗರಿಷ್ಠ ಹತ್ತು (10) ವರ್ಷಗಳಿಗೆ ಮೀರದಂತೆ ವಯೋಮಿತಿ ರಿಯಾಯಿತಿಗೆ ಅರ್ಹರು ಮತ್ತು ರಿಯಾಯಿತಿ ನಂತರ ಅವರ ವಯಸ್ಸು 45 ವರ್ಷದೊಳಗಿರಬೇಕು (Should be below 45 years of age). ಸದರಿ ಸೌಲಭ್ಯವನ್ನು ಪಡೆಯಲು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಸ್ಥರಿಂದ ನಿರಾಕ್ಷೇಪಣಾ ಹಾಗೂ ಸೇವಾ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆದು ಅರ್ಜಿ ಸಲ್ಲಿಸುವುದು. ಸದರಿ ನಿರಾಕ್ಷೇಪಣಾ ಪತ್ರವನ್ನು ಹಾಗೂ ಕಂಡಿಕೆ 7 ರಲ್ಲಿ ನಿಗದಿಪಡಿಸಿದ ದಂಡನಾದೇಶಗಳಿಗೆ ಒಳಪಡದೆ ಇರುವ ಕುರಿತು ಸಂಬಂಧಪಟ್ಟ ಪ್ರಾಧಿಕಾರಸ್ಥರಿಂದ ಅಪರಾಧ ಇತಿಹಾಸ ಪಟ್ಟಿಯನ್ನು ಕಡ್ಡಾಯವಾಗಿ ಪಡೆದು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸುವುದು.

10. ಹುದ್ದೆಗಳ ವರ್ಗೀಕರಣ: ಈ ಅಧಿಸೂಚನೆಯ ಕೊನೆಯಲ್ಲಿ ಪ್ರಕಟಿಸಲಾಗಿದೆ.

11. ಅರ್ಜಿ ಸಲ್ಲಿಸುವ ವಿಧಾನ

- ಪ್ರಾಧಿಕಾರದ ವೆಬ್‌ಸೈಟ್http://kea.kar.nic.inನಲ್ಲಿ ತೋರಿಸುವ ಲಿಂಕ್‌ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ / ತಿದ್ದುಪಡಿಮಾಡಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸುವುದು ಹಾಗೂ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಹೆಚ್ಚುವರಿ ಶುಲ್ಕವನ್ನು ಪಾವತಿಸಬೇಕು.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 21.11.2025 ರಿಂದ |
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 10.12.2025 ರ ವರೆಗೆ |
| ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | 11.11.2025 |

- ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರಅರ್ಜಿಯನ್ನುಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಅಥವಾ ಸುಳ್ಳು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಯಾವುದೇ ಸಮಯದಲ್ಲಿಯಾದರೂ ಅಭ್ಯರ್ಥಿತನವು ರದ್ದುಗೊಳ್ಳುವುದು ಹಾಗು ನಿಯಮಾನುಸಾರ ಅಂತಹವರ ವಿರುದ್ಧ ಸರ್ಕಾರವು / ಪ್ರಾಧಿಕಾರ / ಸಂಸ್ಥೆಯು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

12. ಅರ್ಜಿ ಶುಲ್ಕ:ಆನ್ ಲೈನ್ ಮೂಲಕ ಶುಲ್ಕ ಪಾವತಿಸಬಹುದಾಗಿರುತ್ತದೆ.

| ವಿವರಗಳು | ಶುಲ್ಕ | |
|---|---|---|
| ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | ರೂ. 750/- | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಮಾಜಿ ಸೈನಿಕ | ರೂ. 500/- | |
| ವಿಕಲ ಚೇತನ ಅಭ್ಯರ್ಥಿಗಳು | ರೂ. 250/- | |

ವಿಶೇಷ ಚೇತನ ಅಭ್ಯರ್ಥಿಯೆಂದರೆ ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವವರು ಮತ್ತು ಅದಕ್ಕೆ ಸಂಬಂಧಿಸಿದಂತೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಹೊಂದಿರುವವರು.

13. ಸ್ಪರ್ಧಾತ್ಮಕ ಪರೀಕ್ಷಾ ವಿಧಾನ

- ಮೇಲ್ಕಂಡ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್-ಓಎಂಆರ್ ಮಾದರಿ (Offline-OMR type) ಮೂಲಕ ಪರೀಕ್ಷೆ ನಡೆಸಲಾಗುವುದು.

- ಸ್ಪರ್ಧಾತ್ಮಕ ಪರೀಕ್ಷೆಗಳನ್ನು: ಬೆಂಗಳೂರು, ಮೈಸೂರು, ದಾವಣಗೆರೆ, ದಕ್ಷಿಣ ಕನ್ನಡ, ಶಿವಮೊಗ್ಗ, ಬೆಳಗಾವಿ, ಧಾರವಾಡ, ಬಳ್ಳಾರಿ, ಕೊಪ್ಪಳ, ಮತ್ತು ಕಲಬುರ್ಗಿ ಕೇಂದ್ರಗಳಲ್ಲಿ ನಡೆಸಲಾಗುವುದು. (ಆಡಳಿತಾತ್ಮಕ ಉದ್ದೇಶದಿಂದ ಜಿಲ್ಲಾ ಪರೀಕ್ಷಾ ಕೇಂದ್ರಗಳು ಬದಲಾವಣೆಯ ಷರತ್ತಿಗೆ ಒಳಪಟ್ಟಿರುತ್ತದೆ)ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನ ಪರವಾನಗಿ / ಆಧಾರ್‌ಕಾರ್ಡ್ / ಪಾಸ್ಪೋರ್ಟ್ / ವೋಟರ್ ಐಡಿ/ ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.

14. ಕನ್ನಡ ಭಾಷಾಜ್ಞಾನ ಪರೀಕ್ಷೆ

- ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ವ್ಯಾಸಂಗ ಮಾಡಿದ್ದಲ್ಲಿ ಮಾತ್ರ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುತ್ತಾರೆ. ಇಲ್ಲವಾದಲ್ಲಿ ಜಾರಿಯಲ್ಲಿರುವ ನಿಯಮಾವಳಿಯಂತೆ ಸಂಸ್ಥೆಯು ನಡೆಸುವ ಕನ್ನಡ ಭಾಷಾ ಪರೀಕ್ಷೆಯಲ್ಲಿ ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು. ಇಲ್ಲದಿದ್ದಲ್ಲಿ ಅವರ ಆಯ್ಕೆಯನ್ನು ರದ್ದುಗೊಳಿಸಲಾಗುವುದು.

15. ಪ್ರಶ್ನೆ ಪ್ರತಿಕೆ ಹಾಗೂ ಪಠ್ಯಕ್ರಮ : ದರ್ಜೆ–2 ಅಧಿಕಾರಿ ಹುದ್ದೆಗಳಿಗೆ

| ಪತ್ರಿಕೆ / Paper | ವಿಷಯ / Subject | ಅಂಕಗಳು /Marks | ಅವಧಿ /Duration ಗಂಟೆ / hours |
|---|---|---|---|
| ಪತ್ರಿಕೆ–1 | ಸಾಮಾನ್ಯ ಪತ್ರಿಕೆ(General Paper) | 300 | 2 hours |
| ಪತ್ರಿಕೆ–2 | ನಿರ್ಧಿಷ್ಟ ಪತ್ರಿಕೆ (Specific Paper) | 300 | 2 hours |

- ಸ್ಪರ್ಧಾತ್ಮಕ ಪರೀಕ್ಷೆಗೆ ವಿವರವಾದ ವೇಳಾ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಂತರ ಪ್ರಕಟಿಸಲಾಗುವುದು.

16. ಅರ್ಹತೆ

- ಅಭ್ಯರ್ಥಿಯು ಅರ್ಹತೆಗಾಗಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿನ ಒಟ್ಟು ಅಂಕಗಳಲ್ಲಿ ಕನಿಷ್ಠ ಶೇಕಡಾ 30 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ.

17. ಋಣಾತ್ಮಕ ಮೌಲ್ಯಮಾಪನ (Negative Valuation)

- ಸ್ಪರ್ಧಾತ್ಮಕ ಪರೀಕ್ಷೆ ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದಂಶದಷ್ಟು (¼) ಅಂಕಗಳನ್ನು ಕಳೆಯಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆಗೆ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತದೆ. ಕನ್ನಡ ಆವೃತ್ತಿಯಲ್ಲಿನ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ವ್ಯತ್ಯಾಸ ಕಂಡುಬಂದಲ್ಲಿ ಅಭ್ಯರ್ಥಿಗಳು ಆಂಗ್ಲಭಾಷೆ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ.
- ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ 5ನೇ ಆಯ್ಕೆ/ ವೃತ್ತವನ್ನು ನೀಡಿದ್ದು, ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ/ವೃತ್ತ 5 ಅನ್ನು ಶೇಡ್ ಮಾಡಲು ಕೊನೆಯ ಬೆಲ್ ಆದ ನಂತರ ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ನೀಡಲಾಗುವುದು. ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ ¼ ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.

18. ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಕನಿಷ್ಠ ಶೇಕಡಾ30 ಅಂಕಗಳನ್ನು ಪಡೆದಲ್ಲಿ ಮಾತ್ರ ಮುಂದಿನ ಆಯ್ಕೆ ಪ್ರಕ್ರಿಯೆಗೆ ಅರ್ಹರಿರುತ್ತಾರೆ. ಕನಿಷ್ಠ ಶೇಕಡಾ 30 ಅಂಕಗಳಿಗಿಂತ ಕಡಿಮೆ ಅಂಕ ಪಡೆದವರು ಆಯ್ಕೆ ಪ್ರಕ್ರಿಯೆಗೆ ಅನರ್ಹರಾಗುತ್ತಾರೆ. ಪ್ರತಿ ತಪ್ಪು ಉತ್ತರಕ್ಕೆ ¼ ಅಂಕಗಳನ್ನು ಕಡಿತಗೊಳಿಸಲಾಗುವುದು.

19. ಆಯ್ಕೆ ವಿಧಾನ ನೇರ ನೇಮಕಾತಿ

- ನೇರ ನೇಮಕಾತಿ ಅಧಿಕಾರಿ ಹುದ್ದೆಗಳಿಗೆ ಓ.ಎಂ.ಆರ್. ಮೂಲಕ ಸಾಮಾನ್ಯ ಸಾಮರ್ಥ್ಯ ಪರೀಕ್ಷೆ ನಡೆಸಲಾಗುವುದು, ಅದರಲ್ಲಿ ದರ್ಜೆ–2 ಅಧಿಕಾರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಈ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳ ಶೇಕಡ 50 ರಷ್ಟನ್ನು ಹಾಗೂ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಅವರು ಪಡೆದ ಅಂಕಗಳ ಶೇಕಡ 50 ರಷ್ಟನ್ನು ಒಗ್ಗೂಡಿಸಿ, ಸದರಿ ಒಟ್ಟು ಶೇಕಡಾವಾರು ಅಂಕಗಳ ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

20. ಆಯ್ಕೆ ವಿಧಾನ ಆಂತರಿಕ ನೇಮಕಾತಿ

- ಸಹಾಯಕ ತಾಂತ್ರಿಕ ಶಿಲ್ಪಿ ಮತ್ತು ಸಹಾಯಕ ಕಾನೂನು ಅಧಿಕಾರಿ ಹುದ್ದೆಗಳ ಆಂತರಿಕ ನೇಮಕಾತಿಗಾಗಿ ನಡೆಸುವ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳ ಶೇಕಡ 50 ರಷ್ಟನ್ನು ಹಾಗೂ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಅವರು ಪಡೆದ ಅಂಕಗಳ ಶೇಕಡ 50 ರಷ್ಟನ್ನು ಒಗ್ಗೂಡಿಸಿ ಸದರಿ ಒಟ್ಟು ಶೇಕಡಾವಾರು ಅಂಕಗಳ ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

- ಸಹಾಯಕ ಸಂಚಾರ ವ್ಯವಸ್ಥಾಪಕ ಮತ್ತು ಸಹಾಯಕ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ ಹುದ್ದೆಗಳ ನೇಮಕಾತಿಗಾಗಿ ನಡೆಸುವ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳ ಶೇಕಡ 75 ರಷ್ಟನ್ನು ಹಾಗೂ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಅವರು ಪಡೆದ ಅಂಕಗಳ ಶೇಕಡ 25 ರಷ್ಟನ್ನು ಒಗ್ಗೂಡಿಸಿ ಸದರಿ ಒಟ್ಟು ಶೇಕಡಾವಾರು ಅಂಕಗಳ ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

21. ಅಭ್ಯರ್ಥಿಗಳು ನಮೂದಿಸಿದ ಖಾಯಂ ವಿಳಾಸ ಹಾಗೂ ಪರೀಕ್ಷಾ ಕೇಂದ್ರಗಳ ಲಭ್ಯತೆಯ ಆಧಾರದ ಮೇಲೆ ಪರೀಕ್ಷೆಯನ್ನು ನಡೆಸಲಾಗುವುದು. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಾಗ್ಯೂ ಒಂದೇ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದು (ನೇರ ನೇಮಕಾತಿ/ಆಂತರಿಕ ನೇಮಕಾತಿ ಸೇರಿದಂತೆ) ಮತ್ತು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನೆ ಎಲ್ಲಾ ಹುದ್ದೆಗಳಿಗೂ ಪರಿಗಣಿಸಲಾಗುವುದು.
22. ಮೇಲ್ಕಂಡಂತೆ ಅರ್ಹತೆ ಹಾಗೂ ನೀತಿಯನುಸಾರ ಆಯ್ಕೆಪ್ರಾಧಿಕಾರ ನಿಗದಿಪಡಿಸುವ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಮೂಲ ದಾಖಲಾತಿಗಳು / ದೈಹಿಕ ದಾರ್ಢ್ಯತೆ ಪರಿಶೀಲನೆಗಾಗಿ ಆಹ್ವಾನಿಸಲಾಗುವುದು. ಆಯ್ಕೆಪ್ರಾಧಿಕಾರದಿಂದ ಯಾವುದೇ ಅಂಕಗಳನ್ನು ನೀಡಲಾಗುವುದಿಲ್ಲ.
23. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ, ತಮ್ಮ ಹುದ್ದೆಯ ಆದ್ಯತೆಯನ್ನು ಪ್ರಾಧಿಕಾರದಿಂದ ಕೋರಿದಾಗ ನಮೂದಿಸತಕ್ಕದ್ದು. ಸೂಕ್ತ ಆದ್ಯತೆ ನೀಡದಿದ್ದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.
24. ಆಯ್ಕೆಯ ಸಂದರ್ಭದಲ್ಲಿ ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ಹುದ್ದೆಗಳ ಆದ್ಯತೆಯನುಸಾರ ಹುದ್ದೆವಾರು ಹೊಂದಿರುವ ಮೆರಿಟ್ ಮತ್ತು ಮೀಸಲಾತಿಯ ಅನುಸಾರ ಆಯ್ಕೆಗೆ ಪರಿಗಣಿಸಲಾಗುವುದು.
25. <u>ಅರ್ಹತಾ ಷರತ್ತುಗಳು</u>

    1) ಭಾರತೀಯ ನಾಗರೀಕನಾಗಿರತಕ್ಕದ್ದು.
    2) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.
    3) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
    4) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ವಾ.ಕ.ರ.ಸಾ.ಸಂಸ್ಥೆಯು ಕಾಯ್ದಿರಿಸಿಕೊಂಡಿದೆ.
    5) ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.
    6) ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕಸೇವಾ ಆಯೋಗ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳಿಂದ ನಡೆಸಲಾಗುವ ಪರೀಕ್ಷೆಗಳಿಂದ, ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರು ಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ. ಸಂಸ್ಥೆಯಲ್ಲಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ/ಕೈಗಾರಿಕಾ/ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾದ ಕಾರಣಕ್ಕಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ / ತರಬೇತಿದಾರರಾಗಿ, ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ/ವಜಾ ಮಾಡಿದ್ದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.
    7) **ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.**

**26. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು : (ಶಿಕ್ಷಣಕ್ಕಾಗಿ / ಇತರೆ ಸರ್ಕಾರಿ ಸೌಲಭ್ಯಕ್ಕಾಗಿ / ಸಾಲಕ್ಕಾಗಿ ಪಡೆದ ಜಾತಿ ಆದಾಯ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ)**

- ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:-

  ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:- **ನಮೂನೆ 'ಡಿ'**
  ಆ) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು:- **ನಮೂನೆ 'ಇ'**
  ಇ) ಪ್ರವರ್ಗ-2ಎ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:- **ನಮೂನೆ 'ಎಫ್'**

- ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಪ್ರವರ್ಗ-2ಎ, ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

- **(ಇತರೆ ಹಿಂದುಳಿದ ವರ್ಗಗಳಾದ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ವಿವಾಹಿತ ಮಹಿಳಾ ಅಭ್ಯರ್ಥಿಗಳು ಅವರ ಪತಿಯ ಹೆಸರಿನೊಂದಿಗೆ ಜಾರಿಯಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿಯಲ್ಲಿ ಮೀಸಲಾತಿ ಕೋರತಕ್ಕದ್ದು.)**

**27. ಗ್ರಾಮೀಣ ಅಭ್ಯರ್ಥಿ**

- ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06-01-2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನಿಸಿ 2001 ದಿನಾಂಕ 13-02-2001 ರನ್ವಯ ನಮೂನೆ-2ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

- ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

(ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

**28. ಪ್ರಾಧಿಕಾರದೊಡನೆ ಪತ್ರ ವ್ಯವಹಾರ**

- ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದುದರಿಂದ, ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವಾಗ ಜಾಗರೂಕತೆಯಿಂದ ಭರ್ತಿ ಮಾಡತಕ್ಕದ್ದು. ವಿಳಾಸ ಬದಲಾವಣೆ ಇದ್ದಲ್ಲಿ ಮಾತ್ರ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಪ್ರಾಧಿಕಾರದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಪ್ರಾಧಿಕಾರವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಪ್ರಾಧಿಕಾರವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು. ಅಭ್ಯರ್ಥಿಗಳು ಪ್ರಾಧಿಕಾರದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಈ ಕೆಳಕಂಡ ಮಾಹಿತಿಗಳು ಒಳಗೊಂಡಿರಬೇಕು.
  - (i) ಅರ್ಜಿ ಸಂಖ್ಯೆ &ಹುದ್ದೆಯ / ವಿಷಯದ ಹೆಸರು
  - (ii) ಅಭ್ಯರ್ಥಿಯ ಪೂರ್ಣ ಹೆಸರು (ಬಿಡಿ ಅಕ್ಷರಗಳಲ್ಲಿ)
  - (iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

- ಪ್ರಾಧಿಕಾರದ ಅಧಿಕೃತ 'X' ಖಾತೆ @KEA_KARNATAKA ದಲ್ಲಿ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ನೇಮಕಾತಿ ಸಂಬಂಧದ ಎಲ್ಲಾ ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.
- ಆಯಾ ಹುದ್ದೆಗಳಿಗೆ ಮೂಲ ದಾಖಲೆಗಳ ಪರಿಶೀಲನೆಯ / ಸಂದರ್ಶನಕ್ಕೆ ದಿನಾಂಕ ನಿಗದಿ ಪಡಿಸಿದಾಗ ಅರ್ಹತಾಪಟ್ಟಿಯನ್ನು ಪ್ರಾಧಿಕಾರದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು. ಈ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟಣೆ ಹಾಗೂ ಟಿಪ್ಪಣಿ ಮೂಲಕ ಮಾಹಿತಿ ನೀಡಲಾಗುವುದು / ಸಂದೇಶ ನೀಡಲಾಗುವುದು. ಅರ್ಹ ಅಭ್ಯರ್ಥಿಗಳು ಸೂಚನಾ ಪತ್ರಗಳನ್ನು ಸಂಬಂಧಪಟ್ಟ ಇಲಾಖೆಯ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ನಿಗದಿತ ದಿನಾಂಕ / ಸಮಯಕ್ಕೆ ಮೂಲ ದಾಖಲಾತಿಗಳೊಂದಿಗೆ ಹಾಜರಾಗತಕ್ಕದ್ದು.

**29. ಪ್ರಮುಖವಾದ ಸೂಚನೆಗಳು**

- ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು (Recent photograph in JPEG format, with a file size between 50KB to 200KB) ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ಲ್ಲಿ ಸಹಿಯನ್ನು (Signature in JPEG format, with a file size between 50KB to 70KB) ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು UPLOAD ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ON-LINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣಪತ್ರದ ಹಾಗೂ ಇತರೇ ಪ್ರಮಾಣಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. ವಾ.ಕ.ರ.ಸಾ.ಸಂಸ್ಥೆಯು ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಗೆ ಒಳಪಡುವುದಿಲ್ಲ. ಆದ್ದರಿಂದ ಹೈದ್ರಾಬಾದ್–ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದ ಪ್ರಮಾಣಪತ್ರಗಳನ್ನು ಹೊರತುಪಡಿಸಿ ಇತರೆ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು, ನಂತರ ಪಡೆದ ಯಾವುದೇ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೆಯೇ ಯಾವುದೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿರುವ ನಮೂನೆಗಳಲ್ಲಿರದಿದ್ದಲ್ಲಿ ಮತ್ತು ತಪ್ಪಿದ್ದಲ್ಲಿ ಸದರಿ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

  1) ಆಧಾರ್‌ಕಾರ್ಡ್

  2) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದ ಆಯಾ ಹುದ್ದೆಗಳಿಗೆ ನಿಗದಿಪಡಿಸಲಾದ/ ವಿದ್ಯಾರ್ಹತೆಯ ಎಲ್ಲಾ ವಿಷಯಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರ /ಪಿಡಿಸಿ.

3) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ ಶಾಲೆಯ ವರ್ಗಾವಣೆ ಪ್ರಮಾಣ ಪತ್ರ/ ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.

4) ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ /ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ/ ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

5) ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿಕೋರಿದ್ದಲ್ಲಿ)

6) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ ಗ್ರಾಮೀಣ ಮೀಸಲಾತಿ ಕೋರಿದ ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು) (ಗ್ರಾಮೀಣ ಮೀಸಲಾತಿ ಕೋರಿದ ಪರಿಶಿಷ್ಟಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ–1/ಪ್ರವರ್ಗ–2ಎಅಭ್ಯರ್ಥಿಗಳು ನಮೂನೆ-2 ರಲ್ಲಿ ಮಾತ್ರ)

7) ಇಲಾಖಾ ಅಭ್ಯರ್ಥಿಗಳು ಸಂಬಂಧಪಟ್ಟ ನೇಮಕ, ಪ್ರಾಧಿಕಾರಸ್ಥರಿಂದ ಪಡೆದ ಸೇವಾ / ನಿರಾಕ್ಷೇಪಣಾ ಪ್ರಮಾಣ ಪತ್ರ, (ಸಾರಿಗೆ ಸಂಸ್ಥೆಯ ಇಲಾಖಾ ಅಭ್ಯರ್ಥಿಯಾಗಿದ್ದಲ್ಲಿ)

## 30. ವಿಶೇಷ ಸೂಚನೆಗಳು

1) ಅಭ್ಯರ್ಥಿಗಳು ON LINE ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಮತ್ತು ಶುಲ್ಕ ಪಾವತಿಯ ಚಲನ್ ಅನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು.

2) ಒಬ್ಬ ಅಭ್ಯರ್ಥಿಯು ಒಂದು ಅರ್ಜಿಯನ್ನು ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ. ಒಂದಕ್ಕಿಂತ ಹೆಚ್ಚು ಹುದ್ದೆಗೆ ಅರ್ಜಿ ಸಲ್ಲಿಸಬಯಸುವ ಅಭ್ಯರ್ಥಿಗಳು ಒಂದೇ ಅರ್ಜಿಯಲ್ಲಿ ಎಲ್ಲಾ ಹುದ್ದೆಗಳನ್ನು ಮೆರಿಟ್ ಪ್ರಕಾರ ನಮೂದಿಸಿ ಸಲ್ಲಿಸುವುದು. ಅರ್ಜಿ ಸಲ್ಲಿಸಿರುವ ಎಲ್ಲಾ ಹುದ್ದೆಗಳಿಗೆ ಒಂದೇ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಿ, ಅದರಲ್ಲಿ ಗಳಿಸಿದ ಅಂಕಗಳನ್ನು ಎಲ್ಲಾ ಹುದ್ದೆಗಳ ಆಯ್ಕೆಗೆ ಪರಿಗಣಿಸಲಾಗುವುದು.

3) ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಪ್ರತ್ಯೇಕವಾಗಿ ತಪ್ಪು ಮಾಹಿತಿ ನೀಡಿ ಅರ್ಜಿ ಸಲ್ಲಿಸಿ, ಪರೀಕ್ಷಾ ಕೇಂದ್ರಗಳು ಬೇರೆ ಬೇರೆಯಾಗಿ ನಿಗದಿಯಾದಲ್ಲಿ ಇದಕ್ಕೆ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

4) ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ನಿಗದಿತ ನಮೂನೆಯಲ್ಲಿ ನಿರಾಕ್ಷೇಪಣಾ ಪ್ರಮಾಣ ಪತ್ರ/ ಅನುಮತಿಯನ್ನು / ಸೇವಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ನೇಮಕಾತಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. ಹಾಗೂ ಸೇವಾ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು. ಸುಳ್ಳು ಮಾಹಿತಿಯನ್ನು ನಮೂದಿಸಿದ್ದಲ್ಲಿ ಅನರ್ಹಗೊಳಿಸಲಾಗುವುದು.

5) ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು.

6) ಆಯ್ಕೆಯಾದ ಅಭ್ಯರ್ಥಿಗಳು ಖಾಯಂ ಆಗಿ ವಾ.ಕ.ರ.ಸಾ. ಸಂಸ್ಥೆಯಲ್ಲಿಯೇ ಸೇವೆ ಸಲ್ಲಿಸತಕ್ಕದ್ದು. ಇತರೆ ಸಂಸ್ಥೆಗಳಾದ ಕ.ರಾ.ರ.ಸಾ. ಸಂಸ್ಥೆ / ಬೆಂ.ಮ.ಸಾ. ಸಂಸ್ಥೆ ಮತ್ತು ಕ.ಕ.ರ.ಸಾ. ನಿಗಮಗಳಿಗೆ ವರ್ಗಾವಣೆ / ನಿಯೋಜನೆ ಹೊಂದಲು ಅವಕಾಶವಿರುವುದಿಲ್ಲ.

7) ಅಭ್ಯರ್ಥಿಯು ಅರ್ಜಿಯಲ್ಲಿ ನೀಡುವ ಮೊಬೈಲ್ ಸಂಖ್ಯೆ/ಈ-ಮೇಲ್ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ಮೊಬೈಲ್ ಸಂಖ್ಯೆ/ಈ-ಮೇಲ್ ಗಳಿಗೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

8) ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯ ಪರೀಕ್ಷೆಗೆ ಹಾಜರಾಗಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಫಲಿತಾಂಶ ಪ್ರಕಟವಾಗದ ಪಕ್ಷದಲ್ಲಿ ಅಂತಹ ಅಭ್ಯರ್ಥಿಗಳು, ಅರ್ಜಿ ಸಲ್ಲಿಸುವಂತಿಲ್ಲ.

9) ಅಭ್ಯರ್ಥಿಯು ಸಲ್ಲಿಸುವ ವಿದ್ಯಾರ್ಹತೆಯ ಪ್ರಮಾಣ ಪತ್ರ/ಇನ್ನಿತರೆ ಮೀಸಲಾತಿ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳು ಇದ್ದಲ್ಲಿ ಸಂಬಂಧಪಟ್ಟ ಪ್ರಾಧಿಕಾರಸ್ಥರಿಂದ ಗೊಂದಲ ನಿವಾರಣೆ ಮಾಡುವವರೆಗೆ ಅವರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದಿಲ್ಲ.

10) ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡುವ ಮೊದಲು ವೆಬ್‌ಸೈಟನಲ್ಲಿ ನೀಡಿರುವ ವಿವರವಾದ ಜಾಹೀರಾತನ್ನು/ಸೂಚನೆಗಳನ್ನು/ವಿಧಾನವನ್ನು ತಿಳಿದುಕೊಳ್ಳುವುದು ಹಾಗೂ ಅರ್ಜಿಯಲ್ಲಿ ಘೋಷಿಸಿರುವ ಮಾಹಿತಿಗಳೆ ಅಂತಿಮವಾಗಿದ್ದು, ಹೆಚ್ಚಿನ ಮಾಹಿತಿ / ದಾಖಲೆಗಳ ಸಲ್ಲಿಕೆಗೆ ಅವಕಾಶವಿರುವುದಿಲ್ಲ.

11) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

12) ಆಯ್ಕೆಗೊಂಡು ಸೇವೆಯಲ್ಲಿ ಖಾಯಂಗೊಳ್ಳುವ ಅಭ್ಯರ್ಥಿಗಳು ಉಪದಾನ ಪಾವತಿ ಕಾಯ್ದೆ 1972 ರನ್ವಯ ಉಪಧನ ಪಡೆಯಲು ಅರ್ಹರಿರುತ್ತಾರೆ ಹಾಗೂ ಮುಕ್ತ ವೇತನ ಶ್ರೇಣಿಗೆ ಅರ್ಹರಿರುವುದಿಲ್ಲ.

13) ಆಯ್ಕೆಗೆ ಸಂಬಂಧಿಸಿದಂತೆ ಅಭ್ಯರ್ಥಿಯು ಯಾವುದೇ ವಿಧವಾದ ಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಯಾವದೇ ಮುನ್ಸೂಚನೆ ನೀಡದೆ ಅವರನ್ನು ಆಯ್ಕೆಗೆ ಅನರ್ಹಗೊಳಿಸಲಾಗುವುದು.

31. **ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು**ಮಾಹಿತಿ ಕೇಂದ್ರ**–080–23460460.**(10.00AMto6.00PM)

**32. ದುರ್ನಡತೆ**

- ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು / ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**33. ಗಮನಿಸಿ**

1. ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳಿಗೆ ಈ ಮೇಲಿನ ವಿವಿಧ ಹುದ್ದೆಗಳ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.

2. ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡುಬಂದಲ್ಲಿ, ಸಂಸ್ಥೆಯು ಅಳವಡಿಸಿಕೊಂಡಿರುವ ಕ.ರಾ.ರ.ಸಾ.ಸಂಸ್ಥೆಯಪದವೃಂದ ಮತ್ತು ನೇಮಕಾತಿ ನಿಯಮಾವಳಿ 1982ರ ಹಾಗೂ ಅದರ ತಿದ್ದುಪಡಿ ಪ್ರಕಾರ ಅನ್ವಯಿಸುತ್ತದೆ.

ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:

| | | | |
|---|---|---|---|
| ಸಾ.ಅ | ಸಾಮಾನ್ಯಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಜಾ. ಪ್ರ.ಎ. | ಪರಿಶಿಷ್ಟ ಜಾತಿ ಪ್ರವರ್ಗ ಎ | SC Cat-A | Scheduled Caste Category -A |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ–1 | ಪ್ರವರ್ಗ–1 | Cat–1 | Category–1 |
| 2ಎ | ಪ್ರವರ್ಗ–2ಎ | 2A | Category – 2A |
| 2ಬಿ | ಪ್ರವರ್ಗ–2ಬಿ | 2B | Category – 2B |
| 3ಎ | ಪ್ರವರ್ಗ–3ಎ | 3A | Category – 3A |
| 3ಬಿ | ಪ್ರವರ್ಗ–3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | XMP | Ex-Service men |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ವಿ.ಚೇ | ವಿಕಲ ಚೇತನ | PwD | Person with Disability |
| ತೃ.ಲಿ | ತೃತೀಯ ಲಿಂಗ | TG | Transgender |
| ಯೋ.ಅ | ಯೋಜನಾ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಮ.ಅ | ಮಹಿಳಾ ಅಭ್ಯರ್ಥಿ | Wom | Women Candidate |

ಅ) ದರ್ಜೆ–2 ಅಧಿಕಾರಿಹುದ್ದೆಗಳನೇರ ನೇಮಕಾತಿ ವರ್ಗೀಕರಣ :

- ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ವಿವಿಧ ವೃಂದದ ದರ್ಜೆ–2 ಅಧಿಕಾರಿ ಹುದ್ದೆಗಳ ನೇಮಕಾತಿಗೆ ಪ್ರಕಟಿಸಿದ ಸಂಖ್ಯೆಯು ತಾತ್ಕಾಲಿಕವಾಗಿದ್ದು, ನೇಮಕಾತಿ ಸಮಯದಲ್ಲಿ ಸಂಸ್ಥೆಯು ಅವಶ್ಯಕತೆಗೆ ಅನುಗುಣವಾಗಿ ಹುದ್ದೆಗಳ ಸಂಖ್ಯೆಯನ್ನು ಹೆಚ್ಚು / ಕಡಿಮೆ ಮಾಡಿ ಮಾರ್ಪಡಿಸಬಹುದಾಗಿರುತ್ತದೆ. ಹುದ್ದೆಗಳು ಮತ್ತು ಅವುಗಳ ಮೀಸಲಾತಿ ವರ್ಗೀಕರಣ ಈ ಕೆಳಗಿನಂತಿರುತ್ತದೆ.

| ಸಹಾಯಕ ಆಡಳಿತಾಧಿಕಾರಿ – Asst.Adm.Officer–02 | | | |
|---|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನಿಂದ 2ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಸಾ ಅ | ಒಟ್ಟು |
| ಸಾಮಾನ್ಯ | 1 | 1 | 2 |
| ಒಟ್ಟು | 1 | 1 | 2 |

| ಸಹಾಯಕ ಲೆಕ್ಕಾಧಿಕಾರಿ –Asst.Acct.Officer–02 | | | |
|---|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಸಾ ಅ | ಒಟ್ಟು |
| ಸಾಮಾನ್ಯ | 1 | 1 | 2 |
| ಒಟ್ಟು | 1 | 1 | 2 |

| ಸಹಾಯಕ ಕಾನೂನು ಅಧಿಕಾರಿ –Asst.Law Officer–04+1(B/L)=5 | | | | | |
|---|---|---|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನಿಂದ 4ನೇ ಬಿಂದುವಿನವರೆಗೆ) | ಪ್ರವರ್ಗ–1 (ಹಿಂಬಾಕಿ) | ಪಜಾ ಪ್ರ.ಎ. | ಪ.ಪಂ. | ಸಾ ಅ | ಒಟ್ಟು |
| ಸಾಮಾನ್ಯ | 1 | 1 | 1 | 1 | 4 |
| ಮಹಿಳೆ | – | – | – | 1 | 1 |
| ಒಟ್ಟು | 1 | 1 | 1 | 2 | 5 |

| ಸಹಾಯಕ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ – Asst. Lab & Welfare Officer–04 | | | | |
|---|---|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನಿಂದ 4ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಪ.ಪಂ | ಸಾ ಅ | ಒಟ್ಟು |
| ಸಾಮಾನ್ಯ | 1 | 1 | 1 | 3 |
| ಮಹಿಳೆ | – | – | 1 | 1 |
| **ಒಟ್ಟು** | **1** | **1** | **2** | **4** |

| ಸಹಾಯಕ ತಾಂತ್ರಿಕ ಶಿಲ್ಪಿ –Asst. Mech.Engineer – 06 | | | | | |
|---|---|---|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನಿಂದ 6ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಪ.ಪಂ | ವರ್ಗ–1 | ಸಾ ಅ | ಒಟ್ಟು |
| ಸಾಮಾನ್ಯ | 1 | 1 | 1 | 1 | 4 |
| ಮಹಿಳೆ | – | – | – | 1 | 1 |
| ಗ್ರಾಮೀಣ | – | – | – | 1 | 1 |
| **ಒಟ್ಟು** | **1** | **1** | **1** | **3** | **6** |

| ಸಹಾಯಕ ಸಂಚಾರ ವ್ಯವಸ್ಥಾಪಕ –Asst.Traffic Manager – 08 | | | | | | |
|---|---|---|---|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನಿಂದ 8ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಪ.ಪಂ | ವರ್ಗ–1 | 2ಎ | ಸಾ ಅ | ಒಟ್ಟು |
| ಸಾಮಾನ್ಯ | 1 | 1 | 1 | 1 | 2 | 6 |
| ಮಹಿಳೆ | – | – | – | – | 1 | 1 |
| ಗ್ರಾಮೀಣ | – | – | – | – | 1 | 1 |
| **ಒಟ್ಟು** | **1** | **1** | **1** | **1** | **4** | **8** |

**ಆ) ದರ್ಜೆ–2 ಅಧಿಕಾರಿಹುದ್ದೆಗಳಆಂತರಿಕ ನೇಮಕಾತಿ ವರ್ಗೀಕರಣ :**

| ಸಹಾಯಕ ಕಾರ್ಮಿಕ ಕಲ್ಯಾಣಾಧಿಕಾರಿ – Asst. Labour Welfare .Officer – 01 | | |
|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಒಟ್ಟು |
| ಸಾಮಾನ್ಯ | 1 | 1 |

| ಸಹಾಯಕ ಕಾನೂನು ಅಧಿಕಾರಿ – Asst. Law Officer – 01 | | |
|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಒಟ್ಟು |
| ಸಾಮಾನ್ಯ | 1 | 1 |

| ಸಹಾಯಕ ತಾಂತ್ರಿಕ ಶಿಲ್ಪಿ – Asst. Mechanical Engineer – 02 | | | |
|---|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನಿಂದ 2ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಸಾ ಅ | ಒಟ್ಟು |
| ಸಾಮಾನ್ಯ | 1 | 1 | 2 |
| **ಒಟ್ಟು** | **1** | **1** | **2** |

| ಸಹಾಯಕ ಸಂಚಾರ ವ್ಯವಸ್ಥಾಪಕ – Asst. Traffic Manager – 02 | | | |
|---|---|---|---|
| ಮೀಸಲಾತಿ (1ನೇ ಆವರ್ತ, 1ನೇ ಬಿಂದುವಿನಿಂದ 2ನೇ ಬಿಂದುವಿನವರೆಗೆ) | ಪಜಾ ಪ್ರ.ಎ. | ಸಾ ಅ | ಒಟ್ಟು |
| ಸಾಮಾನ್ಯ | 1 | 1 | 2 |
| **ಒಟ್ಟು** | **1** | **1** | **2** |

- ಜಾಹೀರಾತಿನಲ್ಲಿ ಆಯಾ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳನ್ನು ಮಾತ್ರ ಪರಿಗಣಿಸಲಾಗುವುದು. ಉನ್ನತ ವಿದ್ಯಾಭ್ಯಾಸದ ಅಂಕಗಳನ್ನು ಪರಿಗಣಿಸಲಾಗುವುದಿಲ್ಲ. ಮುಂದುವರೆದು ಆಯಾ ವರ್ಗದ ಸಮತಳ ಮೀಸಲಾತಿಯ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.
- ಆಂತರಿಕ ನೇಮಕಾತಿ ಅನ್ವಯ ಭರ್ತಿ ಮಾಡುವ ಹುದ್ದೆಗಳಿಗೆ ಆಂತರಿಕ ಸೇವಾ ಅಭ್ಯರ್ಥಿಗಳ ಕೊರತೆ ಉಂಟಾದಲ್ಲಿ ಬಾಕಿ ಉಳಿದ ಹುದ್ದೆಗಳನ್ನು ನೇರ ನೇಮಕಾತಿ ಕೋಟಾದಡಿ ಭರ್ತಿ ಮಾಡಲಾಗುವುದು. ಸದರಿ ಹುದ್ದೆಗಳನ್ನು ಹಿಂಬಾಕಿಯಾಗಿ ಮುಂದುವರೆಸುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## SYLLABUS FOR CAT EXAM OF OFFICERS

### (Paper-I 300 Marks)

**Duration 2 Hrs.**

| Sr.No. | Topics | Marks |
|---|---|---|
| 1 | Current events of National and International importance. | 60 |
| 2 | Humanities – History of India – Emphasis shall be on broad general understanding of the subject in its social, economic, cultural and political aspects with a focus on Indian national movement with special emphasis on Karnataka. | 30 |
| 3 | World Geography and Geography of India with a focus on Karnataka | 30 |
| 4 | Data analysis, Information Technology, & data interpretation | 30 |
| 5 | Indian constitution, Indian polity and economy, including the country's political system, rural development, planning and economic reforms in India-sustainable development, poverty alleviation, demographics, social sector initiatives etc., | 60 |
| 6 | Logical reasoning, Mental ability, Arithmetic problem solving | 60 |
| 7 | General science, Environment & climate change | 30 |

### (Paper-II 300 Marks)

**Duration 2 Hrs.**

| Sr.No. | Topics | Marks |
|---|---|---|
| 1 | Acts & Laws related to Transportation – A general understanding of Acts and Laws related to transportation includes RTC act 1950, MTW act 1961, Industrial Dispute act 1947; Factories act 1948, payment of wages act 1948 and shops & establishment act 1948 | 150 |
| 2 | Social security & labour laws | 30 |
| 3 | Public Transportation in India and road transport corporations of Karnataka | 60 |
| 4 | Emerging technologies in transport sector | 30 |
| 5 | Motor Vehicle Act | 30 |

NOTE :

1) The question paper shall be both in Kannada and English languages
2) The standard of question papers shall be that of degree / post graduate level
3) The total marks is 300 for each paper
4) Duration is 120 minutes for each paper
5) There shall be negative marking for each wrong answers- ¼ negative marks